ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ರಾಯಚೂರು ನಗರದಲ್ಲಿ ನಗರ ಬಸ್ ನಿಲ್ದಾಣ ನಿರ್ಮಾಣ ಮಾಡುವ ಬಗ್ಗೆ

ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನಸಭೆಯಿಂದ ಚುನಾಯಿತರಾದವರು):-

273 (388) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಎನ್‌ಇಕೆಎಸ್‌ಆರ್‌ಟಿಸಿ ವತಿಯಿಂದ ಮಾನ್ವಿ ಪಟ್ಟಣದಲ್ಲಿ ಬಸ್ ಡಿಪೋ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದಲ್ಲಿ ನೂತನ ಬಸ್ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯ ನೂತನ ತಾಲ್ಲೂಕು ಸಿರವಾರ ಪಟ್ಟಣದಲ್ಲಿ ನೂತನ ಬಸ್ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಸಿರವಾರ ಪಟ್ಟಣದಲ್ಲಿ ಪ್ರಸ್ತುತ ಇರುವ ಬಸ್ ನಿಲ್ದಾಣದಲ್ಲಿ ಮೂಲಸೌಕರ್ಯಗಳು ಇಲ್ಲದೇ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?